# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ನ್ನು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಕಾಲ ಯೋಜನೆಯಡಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡಿರುವ ಡಾಟಾ ಎಂಟ್ರಿ ಆಪರೇಟರ್‌ಗಳ ಮಾರ್ಚ್-2013ರ ವೇತನಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ: 28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 191 ನಾಸೇಖಾ 2012, ದಿನಾಂಕ: 31/10/2012.
4. ಅಪರ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ರವರ ಪತ್ರ ಸಂಖ್ಯೆ:ಎಡಿಎಂ(1)/ಸಿಆರ್:120/2011-12, ದಿನಾಂಕ: 24/04/2013.

ಪ್ರಸ್ತಾವನೆ :

ಮೇಲೆ ಓದಲಾದ(1) ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ(2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3) ರ ಸರ್ಕಾರದ ಆದೇಶದಲ್ಲಿ ಬೆಂಗಳೂರು ಜಿಲ್ಲೆಯ ಜಿಲ್ಲಾಧಿಕಾರಿಯವರ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯಕ್ಕೆ 13 ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಪ್ರತಿ ಮಾಹೆ ರೂ.8000/-ಗಳಂತೆ ಏಪ್ರಿಲ್ 2012ರಿಂದ ಮಾರ್ಚ್ 2013ರ ಅಂತ್ಯದವರೆಗೆ ವೇತನ ಪಾವತಿಗಾಗಿ ಒಟ್ಟಾರೆ ರೂ.12,48,000/-ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4)ರ ಸರ್ಕಾರದ ಪತ್ರದಲ್ಲಿ ಅಪರ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಇವರು ತಮ್ಮ ಪತ್ರದಲ್ಲಿ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಮಾರ್ಚ್ 2013ರ ಮಾಹೆಯ ವೇತನದ ಬಾಬ್ತು ಡಿ.ಸಿ ಬಿಲ್ ತಯಾರಿಸಿ ರಾಜ್ಯ ಹುಜೂರ್ ಖಜಾನೆಗೆ ಸಲ್ಲಿಸಿದಾಗ ಅನುದಾನವು ವಾಪಸ್ ಆಗಿರುವುದಾಗಿ ತಿಳಿಸಿದ್ದು, ಡಿ.ಸಿ.ಬಿಲ್ಲನ್ನು ಅನುದಾನ ಲಭ್ಯವಿಲ್ಲವೆಂದು ಹಿಂದಿರುಗಿಸಲಾಗಿದೆ. ಇದರಂತೆ 13 ಡಾಟಾ ಎಂಟ್ರಿ ಆಪರೇಟರ್‌ಗಳಿಗೆ

ಮಾಹೆಯಾನ ರೂ.8000/-ಗಳಂತೆ ಒಟ್ಟಾರೆ ರೂ.1,04,000/- (ಒಂದು ಲಕ್ಷದ ನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಮಾರ್ಚ್-2013ರ ವೇತನಕ್ಕಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 191 ನಾಸೇಖಾ 2012, ಬೆಂಗಳೂರು, ದಿನಾಂಕ :29.04.2013**

ಪ್ರಸ್ತಾವನೆಯಲ್ಲಿ ಕೋರಲಾದಂತೆ ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಯವರ ಕಾರ್ಯಾಲಯಕ್ಕೆ 13 ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ತಲಾ ರೂ.8,000/-ಗಳಂತೆ ಮಾರ್ಚ್- 2013ರ ವೇತನದ ಬಾಬ್ತು ರೂ.1,04,000/- (ಒಂದು ಲಕ್ಷದ ನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಬಿಡುಗಡೆ ಮಾಡಿದೆ.

ಸದರಿ ಆದೇಶವನ್ನು 2013-14 ನೇ ಸಾಲಿನ ಲೆಕ್ಕ ಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ಒದಗಿಸಲಾಗಿರುವ ರೂ.15.00 ಕೋಟಿಗಳ ವೆಚ್ಚದಲ್ಲಿ ಭರಿಸತಕ್ಕದ್ದು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಹಣ ಸೆಳೆಯುವ ಅಧಿಕಾರ ನೀಡಲಾಗಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಅಇ 04 ಟಿಎಫ್‌ಪಿ 2012, ದಿನಾಂಕ:27/04/2012ರಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Gayathri 29/4
(ಸಿ.ವಿ. ಗಾಯತ್ರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ನಾಗರೀಕ ಸೇವೆಗಳು)

ಇವರಿಗೆ :

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಕೆ.ಜಿ.ರಸ್ತೆ, ಬೆಂಗಳೂರು-09.
6. ನಿರ್ದೇಶಕರು, ಖಜಾನೆ ಇಲಾಖೆ, ಮೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ನಿರ್ದೇಶಕರು, ಜಿಲ್ಲಾ ಖಜಾನೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಮ್.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
10. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ(ಆಸು), ಬಹುಮಹಡಿ ಕಟ್ಟಡ, ಬೆಂಗಳೂರು.
11. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ(ಆಸು), ಬೆಂಗಳೂರು.
12. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು